<u>ದಿನಾಂಕಃ 16.05.2025 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.</u>

**ಪಾಟೀ ಸವಾಲು ಎಂ ವಿ ಸಿ ನಂ.1369/2016 ರ ಅರ್ಜಿದಾರರ ಪರ ಶ್ರೀ ಟಿ ಡಿ ಕೆ ವಕೀಲರಿಂದಃ**

ನಾನು ವಿದ್ಯಾಭ್ಯಾಸ ಮಾಡಿರುವುದಿಲ್ಲ. ನನಗೆ ಕನ್ನಡ , ಇಂಗ್ಲೀಷ್ ಓದಲು ಬರುವುದಿಲ್ಲ. ಅರ್ಜಿದಾರರು ಈ ಅರ್ಜಿಯಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ . ಅರ್ಜಿದಾರರು ಎಷ್ಟು ಪರಿಹಾರ ಕೇಳಿದ್ದಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ಪೊಲೀಸರು ಸಲ್ಲಿಸಿದ ದಾಖಲೆಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಕೆಎ 16 ಇಸಿ 1154 ರ ಬೈಕ್ ನಮಗೆ ಸೇರಿದೆ. ಅಪಘಾತದ ಸಮಯದಲ್ಲಿ ನಾನು ಸದರಿ ಬೈಕಿನ ಮಾಲೀಕಳಾಗಿದ್ದೇನೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ಕೆಎ 16 ಇಸಿ 1154 ರ ವಾಹನದ ಚಾಲಕನ ತಪ್ಪಿನಿಂದ ಈ ಅಪಘಾತವಾಗಿದೆ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪೊಲೀಸರು ತನಿಖೆ ಪೂರೈಸಿ ದೋಷಾರೋಪಣಾ ಪಟ್ಟಿ ಸಲ್ಲಿಸಿದ ವಿಚಾರ ಗೊತ್ತಿರುತ್ತದೆ. ದೋಷಾರೋಪಣಾ ಪಟ್ಟಿಯಲ್ಲಿ ಕೆಎ 16 ಇಸಿ 1154 ರ ವಾಹನದ ಚಾಲಕನ ತಪ್ಪಿನಿಂದ ಅಪಘಾತವಾಗಿದೆ ಎಂದು ನಮೂದಿಸಿದ್ದಾರೆ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಪರಿಹಾರ ಕೊಡಲು ನಾನೇ ಬಾಧ್ಯಸ್ಥಳು ಎಂದರೆ ಸರಿಯಲ್ಲ. ನನ್ನ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಲು ಸುಳ್ಳು ದಾಖಲೆಗಳನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ .

**ಎಂ ವಿ ಸಿ ನಂ.1132/2019 ರ ಅರ್ಜಿದಾರರ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು

This is a True Copy of the Court Records Online. Authenticated @ districts.ecourtsindia.com/cnr/KACD310015782016/truecopy/order-11.pdf